# ಕ.ರಾ.ರ.ಸಾ.ನಿಗಮ : ಬೆಂಗಳೂರು ಕೇಂದ್ರೀಯ ವಿಭಾಗ : ಬೆಂಗಳೂರು

ಕ್ರ.ಸಂ: ಕರಾಸಾ/ಬೆಂ.ಕೇಂ.ವಿ/ಸಂಚಾರ/ವಾಣಿಜ್ಯ/ 1108 /2023-24 ದಿನಾಂಕ: 18-08-2023

## " ಟೆಂಡರ್ ಪ್ರಕಟಣೆ ಸಂಖ್ಯೆ/04/2023 "

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಕೇಂದ್ರೀಯ ವಿಭಾಗದ ವ್ಯಾಪ್ತಿಯಲ್ಲಿರುವ ವಿಭಾಗೀಯ ಕಾರ್ಯಾಗಾರದ ಆವರಣದಲ್ಲಿರುವ ಕಾರ್ಮಿಕರ ಉಪಹಾರ ಗೃಹವನ್ನು ಟೆಂಡರ್ ಮುಖಾಂತರ ಗುತ್ತಿಗೆಯಾಧಾರದ ಮೇಲೆ 02 ವರ್ಷಗಳ ಅವಧಿಗೆ ನೀಡಲಾಗುವುದು. ಪರವಾನಿಗೆ ಶುಲ್ಕ ಮತ್ತು ನೀರಿನ ಬಿಲ್ಲನ್ನು ಪಾವತಿಸಬೇಕಾಗಿರುವುದಿಲ್ಲ. ವಿದ್ಯುಚ್ಛಕ್ತಿ ಬಿಲ್ಲನ್ನು ಪಾವತಿಸಬೇಕಾಗಿರುತ್ತದೆ. ಸಂಸ್ಥೆಯು ನಿಗದಿಪಡಿಸಿರುವ ದರ, ತೂಕವುಳ್ಳ ಉತ್ತಮ ಗುಣಮಟ್ಟದ ಆಹಾರ ಪದಾರ್ಥಗಳನ್ನು ಒದಗಿಸಬೇಕಾಗಿರುತ್ತದೆ. ಆಹಾರ ಪದಾರ್ಥಗಳ ಮೇಲೆ ಅತೀ ಕಡಿಮೆ ಬಿಡ್ ಮಾಡಿದ ಬಿಡ್‌ದಾರರನ್ನು ಆಯ್ಕೆ ಮಾಡಲಾಗುವುದು. ಟೆಂಡರ್‌ನ್ನು **ದಿನಾಂಕ: 31-08-2023 ರಂದು ಮಧ್ಯಾಹ್ನ 14.00 ಗಂಟೆಗೆ** ವಿಭಾಗೀಯ ನಿಯಂತ್ರಣಾಧಿಕಾರಿ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಕೇಂದ್ರೀಯ ವಿಭಾಗ, ಶಾಂತಿನಗರ, ಬೆಂಗಳೂರು-27, ರವರ ಕಛೇರಿಯಲ್ಲಿ ನಡೆಸಲಾಗುವುದು. ಭಾಗವಹಿಸಲು ಇಚ್ಛೆಯುಳ್ಳವರು ವಿಳಾಸದ ಗುರುತಿನ ಚೀಟಿಯನ್ನು ಸಲ್ಲಿಸಿ, ಅರ್ಜಿಯ ಶುಲ್ಕವನ್ನು ಪಾವತಿಸಿ, ಅರ್ಜಿಯನ್ನು ಹಾಗೂ ಷರತ್ತು ಮತ್ತು ನಿಬಂಧನೆಗಳನ್ನು ಕಛೇರಿ ವೇಳೆಯಲ್ಲಿ ದಿನಾಂಕ: 30-08-2023 ರಂದು 13.00 ಗಂಟೆಯ ಒಳಗೆ ಪಡೆಯಬಹುದು. ಭರ್ತಿಮಾಡಿದ ಅರ್ಜಿ ಹಾಗೂ ಇ.ಎಂ.ಡಿ ಮೊತ್ತದ ಡಿಡಿ ಯನ್ನು ಮತ್ತು ಇತರ ದಾಖಲಾತಿಗಳೊಂದಿಗೆ ದಿನಾಂಕ: 31-08-2023 ರಂದು 12.00 ಗಂಟೆಯ ಒಳಗೆ ಸಲ್ಲಿಸಬಹುದಾಗಿರುತ್ತದೆ.

**ಟೆಂಡರ್‌ಗೆ ಒಳಪಡುವ ಉಪಹಾರ ಗೃಹದ ವಿವರಗಳು**

| ಕ್ರಸ | ಮಳಿಗೆಯ ವಿವರ | ಅವಧಿ (ವರ್ಷಗಳಲ್ಲಿ) | ವಿಸ್ತೀರ್ಣ (ಚ.ಅಡಿಗಳಲ್ಲಿ) | ಮಾಸಿಕ (ರೂ) | ಇ.ಎಂ.ಡಿ (ರೂ.ಗಳಲ್ಲಿ) | ಅರ್ಜಿ ಶುಲ್ಕ / ಜಿಎಸ್‌ಟಿ |
|---|---|---|---|---|---|---|
| 1 | ಉಪಹಾರ ಗೃಹ, ವಿಭಾಗೀಯ ಕಾರ್ಯಾಗಾರ | 2 ವರ್ಷಗಳು | 1136 | - | 10,000/- | 236/- |

ಇ.ಎಂ.ಡಿ. ಮೊತ್ತ ಮತ್ತು ಸಂಬಂಧಪಟ್ಟ ದಾಖಲಾತಿಗಳನ್ನು ಅಡಕಗೊಳಿಸದೇ ಇದ್ದ ಪಕ್ಷದಲ್ಲಿ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಸಲ್ಲಿಸಿರುವ ಅರ್ಜಿಗಳು ಕ್ರಮಬದ್ಧವಾಗಿಲ್ಲದ ಪಕ್ಷದಲ್ಲಿ ತಿರಸ್ಕರಿಸಲಾಗುವುದು. ಯಾವುದೇ ಕಾರಣ ನೀಡದೆ ಟೆಂಡರ್‌ನ್ನು ಪುರಸ್ಕರಿಸುವ / ರದ್ದುಪಡಿಸುವ ಅಥವಾ ಮಾರ್ಪಾಡು ಮಾಡುವ ಅಥವಾ ಯಾವುದೇ ಮುನ್ಸೂಚನೆ ಇಲ್ಲದೆ ಟೆಂಡರ್‌ಗೆ ಬೇಡಿಕೆದಾರರನ್ನು ಆಯ್ಕೆಮಾಡುವ ಅಥವಾ ಟೆಂಡರ್‌ನ್ನು ಮುಂದೂಡುವ ಅಥವಾ ಪ್ರಕಟಣೆಯನ್ನೇ ರದ್ದುಪಡಿಸುವ ಅಧಿಕಾರವನ್ನು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಕಾಯ್ದಿರಿಸಿಕೊಂಡಿದೆ. ಹೆಚ್ಚಿನ ವಿವರಗಳಿಗಾಗಿ ದೂರವಾಣಿ ಸಂಖ್ಯೆ: 7760990261 & 7760990252 ಗಳನ್ನು ಸಂಪರ್ಕಿಸಲು ಕೋರಲಾಗಿದೆ.

ಸಹಿ/-
ವಿಭಾಗೀಯ ನಿಯಂತ್ರಣಾಧಿಕಾರಿ.
ಕರಾರಸಾನಿಗಮ : ಬೆಂಗಳೂರು ಕೇಂದ್ರೀಯ ವಿಭಾಗ.
ಶಾಂತಿನಗರ, ಬೆಂಗಳೂರು.

**ಪ್ರತಿಯನ್ನು ಗೌರವಪೂರ್ವಕವಾಗಿ:-**

ಮುಖ್ಯ ಸಂಚಾರ ವ್ಯವಸ್ಥಾಪಕರು (ವಾಣಿಜ್ಯ) ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ.
ಮುಖ್ಯ ಗಣಕ ವ್ಯವಸ್ಥಾಪಕರು, ಕ.ರಾ.ರ.ಸಾ. ನಿಗಮ, ಕೇಂದ್ರ ಕಛೇರಿ, ರವರ ಮಾಹಿತಿಗಾಗಿ.
ಎಲ್ಲಾ ವಿಭಾಗೀಯ ನಿಯಂತ್ರಣಾಧಿಕಾರಿಗಳು, ಕ.ರಾ.ರ.ಸಾ.ನಿಗಮ ರವರ ಮಾಹಿತಿಗಾಗಿ.
ಎಲ್ಲಾ ಶಾಖಾ ಮುಖ್ಯಸ್ಥರು ಮತ್ತು ಹಿರಿಯ/ಘಟಕ ವ್ಯವಸ್ಥಾಪಕರು, ಘಟಕ-1,2,4,5,6 & ನೆಲಮಂಗಲ ಘಟಕ ರವರ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.

**ಪ್ರತಿಯನ್ನು:** ಭದ್ರತಾ ಮತ್ತು ಜಾಗೃತಾಧಿಕಾರಿ / ವಿಭಾಗ ಸಂಚಾಲನಾಧಿಕಾರಿ / ಕಾರ್ಮಿಕ ಮತ್ತು ಕಲ್ಯಾಣಾಧಿಕಾರಿ / ಸಹಾಯಕ ಲೆಕ್ಕಾಧಿಕಾರಿ / ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು / ಸಹಾಯಕ ಕಾನೂನು ಅಧಿಕಾರಿ, ಕ.ರಾ.ರ.ಸಾ. ನಿಗಮ, ಬೆಂಗಳೂರು ಕೇಂದ್ರೀಯ ವಿಭಾಗ, ಬೆಂಗಳೂರು ರವರ ಮಾಹಿತಿಗಾಗಿ ಹಾಗೂ **ದಿನಾಂಕ: 31-08-2023** ರಂದು ತಪ್ಪದೇ ಟೆಂಡರ್‌ನಲ್ಲಿ ಭಾಗವಹಿಸಲು ಸೂಚಿಸಲಾಗಿದೆ.

ವಿಭಾಗೀಯ ನಿಯಂತ್ರಣಾಧಿಕಾರಿ.